## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿನ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇರ ನೇಮಕಾತಿಗಾಗಿ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014, ದಿನಾಂಕ:01-09-2017.
2. ಕಾಲೇಜು ಶಿಕ್ಷಣ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಕಾಶಿಇ/53/ ವಯೋಮಿತಿ/2018-19/ನೇವಿ-2, ದಿನಾಂಕ:24-05-2018.
3. ಸರ್ಕಾರಿ ಆದೇಶ ಸಂಖ್ಯೆ:ಇಡಿ 354 ಯುಪಿಸಿ 1993, ದಿನಾಂಕ:08-02-1994.
4. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 300 ಡಿಸಿಇ 2013 (ಭಾ), ದಿನಾಂಕ:25-10-2014.
5. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 91 ಡಿಸಿಇ 2004, ದಿನಾಂಕ:25-09-2009
6. ಸರ್ಕಾರಿ ಆದೇಶ ಸಂಖ್ಯೆ:ಇಡಿ 87 ಯುಪಿಸಿ 2016, ದಿನಾಂಕ:24-03-2018.

ಪ್ರಸ್ತಾವನೆ:

ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರಿಗೆ ಬರೆಯಲಾದ ಮೇಲೆ ಓದಲಾದ (1)ರ ಸರ್ಕಾರದ ಪತ್ರದಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಸರ್ಕಾರ ಸಹಮತಿಯನ್ನು ತಿಳಿಸಿರುತ್ತದೆ. ಆಯುಕ್ತರು ತಮ್ಮ ಮೇಲೆ ಓದಲಾದ (2) ರ ಪ್ರಸ್ತಾವನೆಯಲ್ಲಿ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ವಯೋಮಿತಿಯನ್ನು 40, 43, 45 ಎಂಬುದಾಗಿ ಹೆಚ್ಚಿಸಿ ಆದೇಶ ಹೊರಡಿಸುವ ಬಗ್ಗೆ ಸರ್ಕಾರದ ಆದೇಶವನ್ನು ಕೋರಿರುತ್ತಾರೆ.

ಮೇಲೆ ಓದಲಾದ (3) ರಲ್ಲಿನ ಸರ್ಕಾರಿ ಆದೇಶದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇರ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ ಅಭ್ಯರ್ಥಿಗಳಿಗೆ 35 ವರ್ಷಗಳು, ಗ್ರೂಪ್-ಬಿ ಮತ್ತು ಗ್ರೂಪ್-ಸಿ ಗೆ ಸೇರಿದ ಅಭ್ಯರ್ಥಿಗಳಿಗೆ 38 ವರ್ಷಗಳು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಗ್ರೂಪ್-ಎ ಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳೆಂದು ನಿಗಧಿಪಡಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಮೇಲೆ ಓದಲಾದ (4) ರಲ್ಲಿನ ಸರ್ಕಾರಿ ಅಧಿಸೂಚನೆಯಲ್ಲಿ ಜಾರಿಗೊಳಿಸಿದ ಕರ್ನಾಟಕ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2014 ರಲ್ಲಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು, ಸಾಮಾನ್ಯ ಅಭ್ಯರ್ಥಿಗಳಿಗೆ 40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ 43 ವರ್ಷಗಳು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅರ್ಜಿಗಳಿಗೆ 45 ವರ್ಷಗಳೆಂದು ನಿಗಧಿಪಡಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರ ಆಪ್ತಶಾಖೆ
ಕ್ರಮ ಸಂಖ್ಯೆ: 653
ದಿನಾಂಕ: 21-6-18

ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ವೃಂದದ ಹುದ್ದೆಗಳಿಗೆ ಕಾಲೇಜು ಶಿಕ್ಷಣ ಇಲಾಖೆಯ ಮೇಲೆ ಓದಲಾದ (5) ರಲ್ಲಿನ ಸರ್ಕಾರಿ ಅಧಿಸೂಚನೆಯಲ್ಲಿ ಜಾರಿ ಮಾಡಲಾಗಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ನೇರ ನೇಮಕಾತಿಯ ಎಲ್ಲಾ ಷರತ್ತುಗಳು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಯಥಾವತ್ತಾಗಿ ಅನ್ವಯಿಸುತ್ತವೆಯೆಂದು ಮೇಲೆ ಓದಲಾದ (6) ರ ಸರ್ಕಾರಿ ಆದೇಶದಲ್ಲಿ ತಿಳಿಸಲಾಗಿದೆ.

ಮೇಲಿನ ಸನ್ನಿವೇಶಗಳು ಮತ್ತು ಆಯುಕ್ತರ ಪ್ರಸ್ತಾವನೆಯ ಹಿನ್ನೆಲೆಯಲ್ಲಿ ಸರ್ಕಾರ ಈ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಕರ್ನಾಟಕ ಶಿಕ್ಷಣ ಕಾಯ್ದೆ, 1987 (1995 ರ ಕರ್ನಾಟಕ ಕಾಯ್ದೆ 01) ರ ಕಲಂ 87 ರ ಪ್ರಕಾರ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಶೈಕ್ಷಣಿಕ ಸಂಸ್ಥೆಗಳಲ್ಲಿನ ನೌಕರರ ನೇಮಕಾತಿಗಾಗಿ ವಯೋಮಿತಿಯ ಷರತ್ತುಗಳು ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳಲ್ಲಿನ ನೌಕರರಿಗಿರುವ ವಯೋಮಿತಿಯ ಷರತ್ತುಗಳಂತೆ ಇರಬೇಕೆಂದಿದ್ದು, ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇರ ನೇಮಕಾತಿಗೆ ಇರುವ ಗರಿಷ್ಠ ವಯೋಮಿತಿಯ ಷರತ್ತುಗಳಲ್ಲಿನ ವ್ಯತ್ಯಾಸವನ್ನು ಸರಿದೂಗಿಸುವ ಉದ್ದೇಶದಿಂದ, ಒಂದು ಬಾರಿಯ ಕ್ರಮವಾಗಿ, ಸರ್ಕಾರಿ ಆದೇಶ ಸಂಖ್ಯೆ:ಇಡಿ 354 ಯುಪಿಸಿ 1993, ದಿನಾಂಕ:08-02-1994 ರ ಷರತ್ತುಗಳನ್ನು ಸಡಿಲಿಸಿ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ಖಾಲಿ ಆಗಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಸಾಮಾನ್ಯ ಅಭ್ಯರ್ಥಿಗಳಿಗೆ 40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ 43 ವರ್ಷಗಳು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅರ್ಜಿಗಳಿಗೆ 45 ವರ್ಷಗಳೆಂದು ನಿಗಧಿಪಡಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಇಡಿ 49 ಯುಪಿಸಿ 2018,</u>
<u>ಬೆಂಗಳೂರು, ದಿನಾಂಕ:20-06-2018</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರ ಒಂದು ಬಾರಿಯ ಕ್ರಮವಾಗಿ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ಖಾಲಿ ಆಗಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು, ಸಾಮಾನ್ಯ ಅಭ್ಯರ್ಥಿಗಳಿಗೆ 40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ 43 ವರ್ಷಗಳು ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅರ್ಜಿಗಳಿಗೆ 45 ವರ್ಷಗಳೆಂದು ನಿಗಧಿಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಶಿವಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

---

ಸಂಖ್ಯೆ: ಕಾಶಿಇ/158/ಇತರೆ/2016-17/ನೇ.ವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 22.06.2018.

ಮೇಲ್ಕಾಣಿಸಿದ ಸರ್ಕಾರದ ಆದೇಶವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ.

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ.
2) ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಸಂಬಂಧಪಟ್ಟ ಆಡಳಿತ ಮಂಡಳಿಗಳಿಗೆ.
3) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
4) ರಕ್ಷಕ ಕಡತ 5) ಕಛೇರಿ ಪ್ರತಿ.

ಕಾಲೇಜು ಶಿಕ್ಷಣ ಆಯುಕ್ತರು